# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ಗುರುತಿನ ಪ್ರಶ್ನೆ**

ದಿನಾಂಕ : 24-03-2021 ಪ್ರಶ್ನೆ ಸಂಖ್ಯೆ : 281 (2061)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 24-03-2021

ಉತ್ತರಿಸುವ ಸಚಿವರು: ವಸತಿ ಸಚಿವರು

ವಿಷಯ : ಮಂಡ್ಯ ತಾಲ್ಲೂಕಿನ ಎಲೆಚಾಕನಹಳ್ಳಿ ಮತ್ತು ತೂಬಿನಕೆರೆ ಗ್ರಾಮಗಳ ಜಮೀನನ್ನು ವಸತಿ ಯೋಜನೆಗೆ ಭೂಸ್ವಾಧೀನ ಪಡಿಸಿಕೊಂಡ ಬಗ್ಗೆ

(ಅ) ಕರ್ನಾಟಕ ಗೃಹ ಮಂಡಳಿಯ ವತಿಯಿಂದ ಮಂಡ್ಯ ಜಿಲ್ಲೆ, ಮಂಡ್ಯ ತಾಲ್ಲೂಕಿನ ಎಲೆಚಾಕನಹಳ್ಳಿ ಮತ್ತು ತೂಬಿನಕೆರೆ ಗ್ರಾಮಗಳಿಗೆ ಸೇರಿದ ಎಷ್ಟು ಸರ್ವೆ ನಂಬರುಗಳಲ್ಲಿ, ಎಷ್ಟು ವಿಸ್ತೀರ್ಣದ ಜಮೀನನ್ನು ವಸತಿ ಯೋಜನೆಗಾಗಿ ಭೂಸ್ವಾಧೀನ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗಿದೆ; (ಮಾಹಿತಿ ಒದಗಿಸುವುದು)

(ಆ) ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಂಡಿರುವ ಭಾಗದ ಎಷ್ಟು ಮಂದಿ ಭೂ ಮಾಲೀಕರಿಗೆ ಯಾವ ರೂಪದ ಪರಿಹಾರವನ್ನು ನೀಡಲಾಗಿದೆ; (ವಿವರ ನೀಡುವುದು)

(ಇ) 4/1 ಅಧಿಸೂಚನೆಯಾಗಿ ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಳ್ಳದೆ ಇರುವ ಜಮೀನಿನ ವಿಸ್ತೀರ್ಣವೆಷ್ಟು; (ಮಾಹಿತಿ ಒದಗಿಸುವುದು)

(ಈ) ಸದರಿ ಜಮೀನಿನ ಭೂಸ್ವಾಧೀನ ಪ್ರಕ್ರಿಯೆ ವಿಳಂಬವಾಗಲು ಕಾರಣಗಳೇನು; (ವಿವರಗಳೊಡನೆ ಮಾಹಿತಿ ಒದಗಿಸುವುದು)

(ಉ) ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಂಡಿರುವ ಸಂಬಂಧ ಸಿವಿಲ್ ಕಾಮಗಾರಿಗೆ ಟೆಂಡರ್ ಪ್ರಕ್ರಿಯೆ ಕರೆದಿದ್ದಲ್ಲಿ, ಅದರ ಸಂಪೂರ್ಣ ವಿವರಗಳನ್ನು ಒದಗಿಸುವುದು?